RNU AIR DHARWAD

# MAY 23, 2026

## AKASHAVANI - DHARWAD

## PRADESH SAMACHARA (KANNADA) 12.00 P.M.

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ – ಇಸ್ರೋ,** ದೇಶದ ವಿವಿಧ ರಾಜ್ಯಗಳ, 10ನೇ ತರಗತಿ ವಿದ್ಯಾರ್ಥಿಗಳಿಗೆ, ಬಾಹ್ಯಾಕಾಶ ವಿಜ್ಞಾನದ ಕುರಿತು, ಮಾಹಿತಿ ನೀಡಲು ಆಯೋಜಿಸಿದ್ದ, 6ನೇ ಯುವಿಕ–ಯುವ ವಿಜ್ಞಾನಿ ಕಾರ್ಯಕ್ರಮ, ಸಂಪನ್ನಗೊಂಡಿತು. ಬೆಂಗಳೂರಿನ ಯು.ಆರ್.ರಾವ್ ಉಪಗ್ರಹ ಕೇಂದ್ರದಲ್ಲಿ ಆಯೋಜಿತ, ಯುವಿಕ–ಯುವ ವಿಜ್ಞಾನಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ, ವಿಜಯಪುರ ಜಿಲ್ಲೆ, ಮುದ್ದೇಬಿಹಾಳ ತಾಲೂಕು, ಬಿದರಕುಂದಿ, ಸರ್ಕಾರಿ ಆದರ್ಶ ವಿದ್ಯಾಲಯದ ವಿದ್ಯಾರ್ಥಿನಿ ಗ್ರಂಥಿಕಾ, ಪ್ರದೇಶ ಸಮಾಚಾರಕ್ಕಾಗಿ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ....

<><><>

**ಕೇಂದ್ರ ಸರ್ಕಾರದ ವಿವಿಧ ಇಲಾಖೆ** ಹಾಗೂ ಸಂಸ್ಥೆಗಳಲ್ಲಿ, ಹೊಸದಾಗಿ ಸೇರ್ಪಡೆಗೊಂಡ 51 ಸಾವಿರಕ್ಕೂ ಹೆಚ್ಚು ಯುವಜನರಿಗೆ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನೇಮಕಾತಿ ಪತ್ರಗಳನ್ನು ವಿತರಿಸಿದರು. ಹೊಸದಿಲ್ಲಿಯಲ್ಲಿ, ವಿಡಿಯೋ ಕಾನ್ಫರೆನ್ಸ್ ಮೂಲಕ 19 ನೇ ರೋಜಗಾರ ಮೇಳದಲ್ಲಿ ಪಾಲ್ಗೊಂಡು, ಯುವಜನರನ್ನು ಉದ್ದೇಶಿಸಿ ಮಾತನಾಡಿದ ಅವರು, ಉದ್ಯೋಗ ಸೃಷ್ಟಿ ಹಾಗೂ ರಾಷ್ಟ್ರ ನಿರ್ಮಾಣದಲ್ಲಿ ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸಿದರು. ಹುಬ್ಬಳ್ಳಿಯಲ್ಲಿ ಆಯೋಜಿತ, ರೋಜಗಾರ ಮೇಳ ಕಾರ್ಯಕ್ರಮದಲ್ಲಿ, ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಪಾಲ್ಗೊಂಡು ಮಾತನಾಡಿದರು.

<><><>

**ವಿಶ್ವ ಆರೋಗ್ಯ ಸಂಸ್ಥೆ, ಎಬೋಲಾ** ವೈರಸ್ ಬಗ್ಗೆ ಅಂತಾರಾಷ್ಟ್ರೀಯ ಸಾರ್ವಜನಿಕ ಆರೋಗ್ಯ ತುರ್ತು ಪರಿಸ್ಥಿತಿಯನ್ನು ಘೋಷಿಸಿದೆ. ಭಾರತದಲ್ಲಿ ಯಾವುದೇ ಎಬೋಲಾ ಪ್ರಕರಣಗಳು ವರದಿಯಾಗಿಲ್ಲ. ಈ ಸಂದರ್ಭ– ಸಾರ್ವಜನಿಕರು ಸೂಕ್ತ ಮಾಹಿತಿ ಪಡೆದು, ಜಾಗರೂಕರಾಗಿರಬೇಕು. ಅನಗತ್ಯವಾಗಿ ಭಯಪಡುವ ಅಗತ್ಯವಿಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ ಗುಂಡೂರಾವ್ ತಿಳಿಸಿದ್ದಾರೆ. ಎಬೋಲಾ ಪೀಡಿತ ದೇಶಗಳಿಂದ ಇತ್ತೀಚೆಗೆ ಹಿಂದಿರುಗಿದವರು, 21 ದಿನಗಳ ಕಡ್ಡಾಯ ಆರೋಗ್ಯ ಮೇಲ್ವಿಚಾರಣೆಯಲ್ಲಿರಬೇಕು. ಎಬೋಲಾ ರೋಗ ಲಕ್ಷಣಗಳು

ಕಂಡುಬಂದರೆ, ಅಂತಹ ವ್ಯಕ್ತಿಗಳು ಕೂಡಲೇ, ಸಮೀಪದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ವರದಿ ಮಾಡಬೇಕು ಎಂದು ತಮ್ಮ ಎಕ್ಸ್ ಖಾತೆ ಮೂಲಕ ಕೋರಿದ್ದಾರೆ.

<><><>

**ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲೂಕು,** ಸೂರ್ಯನಗರದಲ್ಲಿ ನಿರ್ಮಾಣವಾಗಲಿರುವ, ದೇಶದ 2 ನೇ ಅತಿ ದೊಡ್ಡ ಕ್ರಿಕೆಟ್ ಕ್ರೀಡಾಂಗಣದ ಶಂಕುಸ್ಥಾಪನೆ ಇಂದು ಜರುಗಲಿದೆ. ಕರ್ನಾಟಕ ಗೃಹ ಮಂಡಳಿಯಿಂದ ನಿರ್ಮಾಣವಾಗಲಿರುವ, 76 ಸಾವಿರ ದಿಂದ, 80 ಸಾವಿರ ಆಸನ ಸಾಮರ್ಥ್ಯದ, ಕ್ರೀಡಾಂಗಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭೂಮಿಪೂಜೆ ನೆರವೇರಿಸಲಿದ್ದಾರೆ.

<><><>

**ಕಲ್ಯಾಣ ಕರ್ನಾಟಕ ಭಾಗದ ಬೀದರ್ ಹಾಗೂ** ಕಲಬುರಗಿ ಜಿಲ್ಲಾಕೇಂದ್ರಗಳಿಗೆ ಕ್ರಮವಾಗಿ, ಜೂನ್ 1 ಹಾಗೂ ಜೂನ್ 10 ರಂದು, ಬೆಂಗಳೂರಿನಿಂದ ವಿಮಾನ ಸೇವೆಗಳು ಪುನರಾರಂಭಗೊಳ್ಳಲಿವೆ ಎಂದು ವಾಣಿಜ್ಯ ಮತ್ತು ಕೈಗಾರಿಕೆಗಳ ಖಾತೆ ಸಚಿವ ಎಂ.ಬಿ ಪಾಟೀಲ್ ತಮ್ಮ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ.

**<><><>**

**ಕರ್ನಾಟಕ ಸರ್ಕಾರದ, ಜೀವವೈವಿಧ್ಯ ಮಂಡಳಿ** ಕೊಡಮಾಡುವ, 2025-26ನೇ ಸಾಲಿನ ಜೀವ ವೈವಿಧ್ಯ ಪ್ರಶಸ್ತಿಗೆ, ಶಿವಮೊಗ್ಗ ಜಿಲ್ಲೆ ಸಾಗರ ತಾಲೂಕು, ಚಿಪ್ಪಳ್ಳಿ ಗ್ರಾಮದ ಶ್ರಾವ್ಯಾ ಭಾಜನರಾಗಿದ್ದಾರೆ. ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಆಯೋಜಿತ, ಅಂತಾರಾಷ್ಟ್ರೀಯ ಜೀವವೈವಿಧ್ಯ ಕಾರ್ಯಕ್ರಮದಲ್ಲಿ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ, ಪ್ರಶಸ್ತಿ ಪ್ರದಾನ ಮಾಡಿದರು.

<><><>

**ಹುಬ್ಬಳ್ಳಿ, ಸತ್ತೂರಿನ ಡಿ. ವೀರೇಂದ್ರ ಹೆಗ್ಗಡೆ ಕಲಾಕ್ಷೇತ್ರದಲ್ಲಿ,** 30 ನೇ ತಾರೀಖಿನಂದು, ಹುಬ್ಬಳ್ಳಿ-ಧಾರವಾಡ ರಾಷ್ಟ್ರೀಯ ಸಂಗೀತೋತ್ಸವ ಕಾರ್ಯಕ್ರಮ ಆಯೋಜಿತವಾಗಿದೆ. ಹಿಂದೂಸ್ತಾನಿ ಸಂಗೀತ ಕ್ಷೇತ್ರದಲ್ಲಿ ವಿಶೇಷ ಸಾಧನೆಗೈದ ವಿದುಷಿ ಕೌಶಿಕಿ ಚಕ್ರವರ್ತಿ ಪಾಲ್ಗೊಳ್ಳಲಿದ್ದಾರೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಷಿ ತಿಳಿಸಿದ್ದಾರೆ.

<><><>

**ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ,** ಜನಪ್ರಿಯ 'ಮನ್ ಕಿ ಬಾತ್'ನ 134ನೇ ಆವೃತ್ತಿ, ಈ ತಿಂಗಳ 31 ರಂದು ಪ್ರಸಾರವಾಗಲಿದೆ. ನಾಗರಿಕರು ತಮ್ಮ ಅಭಿಪ್ರಾಯಗಳನ್ನು, ಈ ತಿಂಗಳ 29 ರೊಳಗೆ My Gov.in ಮೂಲಕ, ಹಂಚಿಕೊಳ್ಳಬಹುದು.

<><><>

**ಚಿಕ್ಕಮಗಳೂರು ಜಿಲ್ಲೆಯಲ್ಲಿ, ಮತದಾರರ** ವಿಶೇಷ ತೀವ್ರ ಪರಿಷ್ಕರಣೆಯ, ಮನೆ ಮನೆ ಸಮೀಕ್ಷೆ ಜೂನ್ 30 ರಿಂದ ಜುಲೈ 29ರವರೆಗೆ ನಡೆಯಲಿದೆ, ಆಗಸ್ಟ್ 5 ರಂದು ಕರಡು ಮತದಾರರ ಪಟ್ಟಿ

ಪ್ರಕಟಿಸಲಾಗುವುದು ಎಂದು ಜಿಲ್ಲಾಧಿಕಾರಿ ಭಂವರ ಸಿಂಗ್ ಮೀನಾ ತಿಳಿಸಿದ್ದಾರೆ. ಅಕ್ಟೋಬರ್ 1 ರಂದು ಎಸ್ಐಆರ್ ಅರ್ಹತಾ ದಿನಾಂಕವಾಗಿ ನಿಗದಿಪಡಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**<><><>**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

**<><><>**